ಖಂಡಿತವಾಗಿಯೂ ನೀನು ಒಂದು ಮಹತ್ತರವಾದ ವಿಷಯದ ಬಗ್ಗೆ ಕೇಳಿದ್ದೀಯಾ. ಖಂಡಿತವಾಗಿಯೂ ಅಲ್ಲಾಹು ಯಾರಿಗೆ ಅದನ್ನು ಸುಲಭಗೊಳಿಸುತ್ತಾನೋ ಅವನಿಗೆ ಅದು ಸುಲಭವಾಗಿದೆ

ಮುಆದ್ ಇಬ್ನ್ ಜಬಲ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಅವರು ಹೇಳಿದರು: ನಾನು ಹೇಳಿದೆನು: "ಓ ಅಲ್ಲಾಹನ ಸಂದೇಶವಾಹಕರೇ! ನನಗೆ ಸ್ವರ್ಗಕ್ಕೆ ಸೇರಿಸುವ ಮತ್ತು ನರಕದಿಂದ ದೂರ ಮಾಡುವ ಒಂದು ಕಾರ್ಯದ ಬಗ್ಗೆ ತಿಳಿಸಿರಿ". ಅವರು (ಪ್ರವಾದಿ) ಹೇಳಿದರು: "ಖಂಡಿತವಾಗಿಯೂ ನೀನು ಒಂದು ಮಹತ್ತರವಾದ ವಿಷಯದ ಬಗ್ಗೆ ಕೇಳಿದ್ದೀಯಾ. ಖಂಡಿತವಾಗಿಯೂ ಅಲ್ಲಾಹು ಯಾರಿಗೆ ಅದನ್ನು ಸುಲಭಗೊಳಿಸುತ್ತಾನೋ ಅವನಿಗೆ ಅದು ಸುಲಭವಾಗಿದೆ: ನೀನು ಅಲ್ಲಾಹನನ್ನು ಆರಾಧಿಸು, ಅವನೊಂದಿಗೆ ಯಾವುದನ್ನೂ ಸಹಭಾಗಿಯಾಗಿ ಮಾಡಬೇಡ (ಶಿರ್ಕ್ ಮಾಡಬೇಡ). ನಮಾಝ್ ಅನ್ನು ಸಂಸ್ಥಾಪಿಸು. ಝಕಾತ್ ಅನ್ನು ನೀಡು. ರಮದಾನ್ನಲ್ಲಿ ಉಪವಾಸ ಆಚರಿಸು. ಮತ್ತು ಹಜ್ಜ್ ಮಾಡು". ನಂತರ ಅವರು ಹೇಳಿದರು: "ನಾನು ನಿನಗೆ ಒಳಿತಿನ ದ್ವಾರಗಳನ್ನು ತೋರಿಸಬೇಡವೇ? ಉಪವಾಸವು ಒಂದು ಗುರಾಣಿಯಾಗಿದೆ. ನೀರು ಬೆಂಕಿಯನ್ನು ನಂದಿಸುವಂತೆ, ಸದಕಾ (ದಾನ) ಪಾಪವನ್ನು ನಂದಿಸುತ್ತದೆ. ಒಬ್ಬ ವ್ಯಕ್ತಿ ರಾತ್ರಿಯ ಮಧ್ಯದಲ್ಲಿ ಮಾಡುವ ನಮಾಝ್". ನಂತರ ಅವರು (ಕುರ್ಆನ್ನ ಈ ವಚನವನ್ನು) ಪಠಿಸಿದರು: "ಅವರ ಪಾರ್ಶ್ವಗಳು ಹಾಸಿಗೆಗಳಿಂದ ದೂರವಿರುತ್ತವೆ..." [ಸೂರಃ ಅಸ್ಸಜ್ದಾ: 16] "...ಅವರು ಮಾಡುತ್ತಿದ್ದ (ಕಾರ್ಯಗಳಿಗಾಗಿ)." [ಸೂರಃ ಅಸ್ಸಜ್ದಾ: 17] ವರೆಗೆ. ನಂತರ ಅವರು ಹೇಳಿದರು: "ನಾನು ನಿನಗೆ ವಿಷಯದ ಶಿರಸ್ಸು, ಅದರ ಸ್ತಂಭ, ಮತ್ತು ಅದರ ಉನ್ನತ ಶಿಖರದ ಬಗ್ಗೆ ತಿಳಿಸಬೇಡವೇ?" ನಾನು ಹೇಳಿದೆನು: "ಖಂಡಿತವಾಗಿ, ಓ ಅಲ್ಲಾಹನ ಸಂದೇಶವಾಹಕರೇ!" ಅವರು ಹೇಳಿದರು: "ವಿಷಯದ ಶಿರಸ್ಸು ಇಸ್ಲಾಂ ಆಗಿದೆ, ಅದರ ಸ್ತಂಭವು ನಮಾಝ್ ಆಗಿದೆ, ಮತ್ತು ಅದರ ಉನ್ನತ ಶಿಖರವು ಜಿಹಾದ್ ಆಗಿದೆ". ನಂತರ ಅವರು ಹೇಳಿದರು: "ನಾನು ನಿನಗೆ ಅದೆಲ್ಲವನ್ನೂ ನಿಯಂತ್ರಿಸುವ ವಿಷಯದ ಬಗ್ಗೆ ತಿಳಿಸಬೇಡವೇ?" ನಾನು ಹೇಳಿದೆನು: "ಖಂಡಿತವಾಗಿ, ಓ ಅಲ್ಲಾಹನ ಸಂದೇಶವಾಹಕರೇ!" ಆಗ ಅವರು ತಮ್ಮ ನಾಲಿಗೆಯನ್ನು ಹಿಡಿದುಕೊಂಡು ಹೇಳಿದರು: "ಇದನ್ನು ನಿಯಂತ್ರಿಸು". ನಾನು ಹೇಳಿದೆನು: "ಓ ಅಲ್ಲಾಹನ ಪ್ರವಾದಿಯವರೇ! ನಾವು ಮಾತನಾಡಿದ ವಿಷಯಗಳಿಗಾಗಿ ನಮ್ಮನ್ನು ಶಿಕ್ಷಿಸಲಾಗುವುದೇ?" ಆಗ ಅವರು ಹೇಳಿದರು: "ನಿನ್ನ ತಾಯಿ ನಿನ್ನನ್ನು ಕಳೆದುಕೊಳ್ಳಲಿ (ಇದು ಅರಬ್ಬರ ಒಂದು ನುಡಿಗಟ್ಟು,
ಅಕ್ಷರಶಃ ಅರ್ಥವಲ್ಲ)! ಜನರ ನಾಲಿಗೆಗಳ ಕೊಯ್ಲುಗಳಲ್ಲದೆ ಬೇರೆ ಯಾವುದಾದರೂ ಅವರನ್ನು ಅವರ
ಮುಖಗಳ ಮೇಲೆ (ಅಥವಾ ಅವರು ಹೇಳಿದರು: ಅವರ ಮೂಗುಗಳ ಮೇಲೆ) ನರಕದಲ್ಲಿ ಕೆಡವುತ್ತದೆಯೇ?!"
[صحيح] [رواه الترمذي]

ಮುಆದ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಹೇಳಿದರು: ಒಮ್ಮೆ ಒಂದು ಯಾತ್ರೆಯಲ್ಲಿ ನಾನು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜೊತೆಯಲ್ಲಿದ್ದೆ. ಹೀಗಿರುವಾಗ, ಒಂದಿನ ಬೆಳಗ್ಗೆ ನಾನು ಅವರಿಗೆ ಸಮೀಪದಲ್ಲೇ ಸವಾರಿ ಮಾಡುತ್ತಾ ಸಾಗುತ್ತಿದ್ದೆ. ನಾನು ಹೇಳಿದೆ: "ಓ ಅಲ್ಲಾಹನ ಸಂದೇಶವಾಹಕರೇ! ನನ್ನನ್ನು ಸ್ವರ್ಗಕ್ಕೆ ಪ್ರವೇಶ ಮಾಡಿಸುವ ಮತ್ತು ನನ್ನನ್ನು ನರಕದಿಂದ ದೂರವಿರಿಸುವ ಒಂದು ಕರ್ಮದ ಬಗ್ಗೆ ತಿಳಿಸಿಕೊಡಿ." ಅವರು ಉತ್ತರಿಸಿದರು: "ಜನರಿಗೆ ಮಾಡಲು ಅತ್ಯಂತ ಕಷ್ಟವಿರುವ ವಿಷಯದ ಬಗ್ಗೆ ನೀನು ಕೇಳಿರುವೆ. ಆದರೆ, ಅಲ್ಲಾಹು ಯಾರಿಗೆ ಸುಲಭಗೊಳಿಸುತ್ತಾನೋ ಅವನಿಗೆ ಅದು ಸುಲಭ ಮತ್ತು ಸರಳವಾಗಿದೆ. ಇಸ್ಲಾಮಿನ ಈ ಕೆಳಗಿನ ಕಡ್ಡಾಯ ಕಾರ್ಯಗಳನ್ನು ನೆರವೇರಿಸು: ಒಂದು: ಅಲ್ಲಾಹನನ್ನು ಮಾತ್ರ ಆರಾಧಿಸುವುದು ಹಾಗೂ ಅವನೊಂದಿಗೆ ಏನನ್ನೂ ಸಹಭಾಗಿಯಾಗಿ ಮಾಡದಿರುವುದು. ಎರಡು: ದಿನ-ರಾತ್ರಿಗಳಲ್ಲಿ ನಿರ್ವಹಿಸಲಾಗುವ ಫಜ್ರ್, ಝುಹರ್, ಅಸರ್, ಮಗ್ರಿಬ್ ಮತ್ತು ಇಶಾ ಎಂಬ ಐದು


النجاة الخيرية
ALNAJAT CHARITY


لجنة الدعوة الإلكترونية
EDC
E-Da'wah Committee